# <u>ಕರ್ನಾಟಕ ವಿಧಾನ ಪರಿಷತ್ತು</u>

1. **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 536
2. **ಸದಸ್ಯರ ಹೆಸರು** : ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು)
3. **ಉತ್ತರಿಸಬೇಕಾದ ದಿನಾಂಕ** : 08.12.2023
4. **ಉತ್ತರಿಸುವವರು** : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr>
<td>ಅ)</td>
<td>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ 371ಜೆ ಅಡಿಯಲ್ಲಿ ಬರುವ ಕಲ್ಯಾಣ ಕರ್ನಾಟಕ ಮತ್ತು ಬೆಂಗಳೂರು ತಾಲ್ಲೂಕು ಪಂಚಾಯತ್‌ಗಳಲ್ಲಿ ನೇರ ನೇಮಕಾತಿ ಮತ್ತು ಬಡ್ತಿಗಾಗಿ ಮಂಜೂರಾಗಿರುವ, ಭರ್ತಿಯಾಗಿರುವ ಹಾಗೂ ಖಾಲಿ ಇರುವ ಕಾರ್ಯನಿರ್ವಾಹಕ ಅಧಿಕಾರಿಗಳ ಹುದ್ದೆಗಳೆಷ್ಟು; (ವಿವರ ನೀಡುವುದು)</td>
<td>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದಕ್ಕೆ ಮೀಸಲಿರಿಸಲಾದ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗಳ ವಿವರಗಳು ಈ ಕೆಳಗಿನಂತಿವೆ.
<table>
<tr><th colspan="2">ಮಂಜೂರಾಗಿರುವ ಹುದ್ದೆಗಳು</th><th colspan="2">ಭರ್ತಿಯಾಗಿರುವ ಹುದ್ದೆಗಳು</th><th colspan="2">ಖಾಲಿಯಿರುವ ಹುದ್ದೆಗಳು</th></tr>
<tr><td>ನೇರ ನೇಮಕಾತಿ</td><td>ಬಡ್ತಿ</td><td>ನೇರ ನೇಮಕಾತಿ</td><td>ಬಡ್ತಿ</td><td>ನೇರ ನೇಮಕಾತಿ</td><td>ಬಡ್ತಿ</td></tr>
<tr><td>18</td><td>27</td><td>8</td><td>17</td><td>10</td><td>10</td></tr>
</table>
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ರಾಜ್ಯ ವ್ಯಾಪ್ತಿ ಅಧಿಕಾರ ಹೊಂದಿರುವ ಕಛೇರಿಗಳಾದ ಪಂಚಾಯತ್ ರಾಜ್ ಆಯುಕ್ತಾಲಯ ಮತ್ತು ಗ್ರಾಮೀಣಾಭಿವೃದ್ಧಿ ಆಯುಕ್ತಾಲಯಗಳನ್ನು ಸೃಜಿಸಲಾಗಿದ್ದು ಸದರಿ ಕಛೇರಿಗಳಲ್ಲಿ ಮಂಜೂರಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ವಿಧಾನವನ್ನು ನಿಗದಿಪಡಿಸಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿರುವುದಿಲ್ಲ. ಪ್ರಸ್ತುತ ಸದರಿ</td>
</tr>
</table>

| | | |
|---|---|---|
| | | ಹುದ್ದೆಗಳನ್ನು ನಿಯೋಜನೆ ಹಾಗೂ ಬೇರೆ ಕಛೇರಿಗಳ ಹುದ್ದೆಗಳನ್ನು ಸ್ಥಳಾಂತರ ಮಾಡುವ ಮೂಲಕ ನಿರ್ವಹಣೆ ಮಾಡಲಾಗುತ್ತಿದೆ.<br>ಸದರಿ ಕಛೇರಿಗಳಲ್ಲಿ ಮಂಜೂರಾಗಿರುವ ಹುದ್ದೆಗಳಿಗೆ ನೇಮಕಾತಿ ವಿಧಾನವನ್ನು ನಿಗದಿಪಡಿಸಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿದ ನಂತರ, ಸದರಿ ಹುದ್ದೆಗಳು ಹಾಗೂ ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಬರುವ ಕಛೇರಿಗಳಲ್ಲಿನ ಹುದ್ದೆಗಳನ್ನು ಒಳಗೊಂಡಂತೆ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದಕ್ಕೆ 8% ಮೀಸಲಾತಿ ಕಲ್ಪಿಸಲು ಸಾಧ್ಯವಾಗುತ್ತದೆ. ಆದ್ದರಿಂದ ರಾಜ್ಯಮಟ್ಟದ ಕಛೇರಿಗಳಲ್ಲಿನ ಹುದ್ದೆಗಳಿಗೆ ನೇಮಕಾತಿ ವಿಧಾನ ನಿಗದಿಪಡಿಸಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿದ ನಂತರ ಸದರಿ ರಾಜ್ಯ ಮಟ್ಟದ ಕಛೇರಿಗಳು ಮತ್ತು ಬೆಂಗಳೂರು ತಾಲ್ಲೂಕು ಪಂಚಾಯಿತಿಗಳಲ್ಲಿನ ಹುದ್ದೆಗಳಿಗೆ ನಿಯಮಾನುಸಾರ 8% ಮೀಸಲಾತಿ ಕಲ್ಪಿಸಲಾಗುವುದು. |
| ಆ) | 371ಜೆ ಅಡಿಯಲ್ಲಿ ಸದರಿ ಹುದ್ದೆಗಳಿಗೆ ಯಾವಾಗ ಬಡ್ತಿ ನೀಡಲಾಗಿದೆ; ಬಡ್ತಿಗಾಗಿ ಮೀಸಲಾದ ಸದರಿ ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡಲು ಸರಕಾರಕ್ಕೆ ಇರುವ ತೊಂದರೆ ಏನು; ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು. | 371ಜೆ ಅಡಿಯಲ್ಲಿ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದಲ್ಲಿ ಮುಂಬಡ್ತಿ ಕೋಟಾದಡಿ 27 ಹುದ್ದೆಗಳು ಮಂಜೂರಾಗಿದ್ದು ಅವುಗಳ ಪೈಕಿ 14 ಹುದ್ದೆಗಳನ್ನು ಖಾಲಿ ಹುದ್ದೆಗಳು ಮತ್ತು ಅರ್ಹ ಅಧಿಕಾರಿಗಳ ಲಭ್ಯತೆಗನುಗುಣವಾಗಿ ಕಾಲಕಾಲಕ್ಕೆ ನಿಯಮಾನುಸಾರ ಮುಂಬಡ್ತಿ ಮೂಲಕ ಭರ್ತಿ ಮಾಡಿಕೊಳ್ಳಲಾಗಿರುತ್ತದೆ. ಪ್ರಸ್ತುತ ಮುಂಬಡ್ತಿ ಕೋಟಾದಡಿ 10 ಹುದ್ದೆಗಳು ಖಾಲಿ ಇದ್ದು ಅವುಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಿಕೊಳ್ಳಲು ಸಹಾಯಕ ನಿರ್ದೇಶಕರ ವೃಂದದಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದೇ ಇರುವುದರಿಂದ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸಾಧ್ಯವಾಗಿರುವುದಿಲ್ಲ. ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವಂತೆ ಅರ್ಹ ಅಧಿಕಾರಿಗಳು ಲಭ್ಯವಾದ ಕೂಡಲೇ ಮುಂಬಡ್ತಿ ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ನಿಯಮಾನುಸಾರ ಕ್ರಮ ವಹಿಸಲಾಗುವುದು. |

| | | |
|---|---|---|
| **ಇ)** | ನೇರ ನೇಮಕಾತಿಗೆ ಮೀಸಲಾದ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಹುದ್ದೆಗಳು ಭರ್ತಿಯಾಗುವವರೆಗೆ ನಿಯಮ 32ರಲ್ಲಿ ಬಡ್ತಿ ನೀಡುವುದರ ಮೂಲಕ ಇಲಾಖೆಯಲ್ಲಿ ಅಧಿಕಾರಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ವ್ಯವಸ್ಥೆ ಮಾಡಲು ಸಾಧ್ಯವಿಲ್ಲವೇ ನೇರ ನೇಮಕಾತಿ ಮೂಲಕ ಹುದ್ದೆಗಳು ಭರ್ತಿಯಾಗುವವರೆಗೆ ನಿಯಮ 32ರಲ್ಲಿ ಬಡ್ತಿ ನೀಡಲು ಸರಕಾರಕ್ಕಿರುವ ತೊಂದರೆ ಏನು; ಯಾವಾಗ ಬಡ್ತಿನೀಡಲಾಗುವುದು? | ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದಲ್ಲಿ ನೇರ ನೇಮಕಾತಿ ಕೋಟಾದಡಿ ಮಂಜೂರಾಗಿರುವ 18 ಹುದ್ದೆಗಳ ಪೈಕಿ 08 ಹುದ್ದೆಗಳು ಭರ್ತಿಯಾಗಿದ್ದು, ಖಾಲಿ ಇರುವ 10 ಹುದ್ದೆಗಳನ್ನು ಮುಂದಿನ 03 ವರ್ಷಗಳ ಅವಧಿಯಲ್ಲಿ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ. ಅದರಂತೆ ಖಾಲಿಯಿರುವ 10 ಹುದ್ದೆಗಳ ಪೈಕಿ ಪ್ರಸಕ್ತ ಸಾಲಿನಲ್ಲಿ 04 ಹುದ್ದೆಗಳನ್ನು ಭರ್ತಿ ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.<br>ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಹೊರಡಿಸಿರುವ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2021, ದಿನಾಂಕ:10.12.2021ರಲ್ಲಿ ಈ ಕೆಳಗಿನಂತೆ ತಿಳಿಸಿರುತ್ತದೆ.<br>"ನೇರ ನೇಮಕಾತಿ ಮುಖಾಂತರ ನೇಮಕಾತಿ ಹೊಂದಿದ ನೌಕರನು ಮುಂಬಡ್ತಿ, ನಿವೃತ್ತಿ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ಹುದ್ದೆಯನ್ನು ತೆರವುಗೊಳಿಸಿದಲ್ಲಿ, **ತೆರವಾಗುವ ಆ ಹುದ್ದೆಯನ್ನು ನೇರ ನೇಮಕಾತಿಯಿಂದಲೇ ಭರ್ತಿ ಮಾಡತಕ್ಕದ್ದು**.<br>ಆಡಳಿತಾತ್ಮಕ ತುರ್ತು ಸಂದರ್ಭಗಳಲ್ಲಿ ಮತ್ತು ವಿರಳವಾದ ಹಾಗೂ ಅಪವಾದಾತ್ಮಕ ಪ್ರಕರಣಗಳಲ್ಲಿ **ಮಾತ್ರ** ಕಾರಣಗಳನ್ನು ಸ್ಪಷ್ಟವಾಗಿ ಲಿಖಿತ ಮೂಲಕ ದಾಖಲಿಸಿ ನೇರ ನೇಮಕಾತಿ ಹುದ್ದೆಗಳ ಎದುರಾಗಿ ತಾತ್ಕಾಲಿಕವಾಗಿ ಸ್ವತಂತ್ರ ಪ್ರಭಾರ ವ್ಯವಸ್ಥೆಯನ್ನು ಮಾಡಬಹುದು".<br>ಖಾಲಿ ಇರುವ ಹುದ್ದೆಗಳಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1958ರ ನಿಯಮ -32ರಡಿ ಸ್ವತಂತ್ರ ಪ್ರಭಾರದ ವ್ಯವಸ್ಥೆ ಮಾಡಬೇಕಾದಲ್ಲಿ, ಕಾರ್ಯನಿರ್ವಾಹಕ ಅಧಿಕಾರಿಯ ಹುದ್ದೆಯ ಮುಂಬಡ್ತಿಗೆ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಅರ್ಹತೆಯನ್ನು ಹೊಂದಿರಬೇಕು |

| | | |
|---|---|---|
| | | ಅಥವಾ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಸಮಾನಾಂತರ ಹುದ್ದೆ ಹೊಂದಿರಬೇಕು.<br><br>ಖಾಲಿ ಇರುವ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗಳಿಗೆ ನಿಯಮ-32ರಡಿ ಸ್ವತಂತ್ರ ಪ್ರಭಾರದಲ್ಲಿರಿಸಬೇಕಾದಲ್ಲಿ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದಲ್ಲಿನ ಸಹಾಯಕ ನಿರ್ದೇಶಕ ವೃಂದದಲ್ಲಿನ ಅಧಿಕಾರಿಗಳು ಸದರಿ ವೃಂದದಲ್ಲಿ ಕನಿಷ್ಠ 03 (ಮೂರು) ವರ್ಷಗಳ ಸೇವೆ ಪೂರ್ಣಗೊಳಿಸಿರಬೇಕು. ಆದರೆ, ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದಲ್ಲಿ ಸಹಾಯಕ ನಿರ್ದೇಶಕ ವೃಂದದಲ್ಲಿ ಯಾವುದೇ ಅಧಿಕಾರಿಗಳು ಸದರಿ ವೃಂದದಲ್ಲಿ ಕನಿಷ್ಠ 03 (ಮೂರು) ವರ್ಷಗಳ ಸೇವೆ ಪೂರ್ಣಗೊಳಿಸಿರುವುದಿಲ್ಲ. ಆದ್ದರಿಂದ ಖಾಲಿಯಿರುವ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗಳಿಗೆ ಸಹಾಯಕ ನಿರ್ದೇಶಕ ವೃಂದದ ಅಧಿಕಾರಿಗಳನ್ನು ನಿಯಮ-32ರಡಿ ಸ್ವತಂತ್ರ ಪ್ರಭಾರದಲ್ಲಿರಿಸಲು ಸಾಧ್ಯವಾಗುವುದಿಲ್ಲ. |

ಸಂಖ್ಯೆ: ಗ್ರಾಅಪ 322 ಪಬವ 2023 (ಇ)

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು